4) ಅಮ್ಮಿನಭಾವಿಯಿಂದ ಹುಬ್ಬಳ್ಳಿಗೆ ನೇರವಾಗಿ ನೀರು ಸರಬರಾಜು ಮಾಡಲು ಕೊಳವೆ ಮಾರ್ಗ ಅಳವಡಿಕೆ ಯೋಜನೆಯನ್ನು ವಿಶ್ವ ಬ್ಯಾಂಕ್ ಸಹಾಯದೊಂದಿಗೆ (KUWASSIP) ವ ಯೋಜನಯಲ್ಲಿ ರೂ 3852 00 ಲಕ್ಷಗಳ ಯೋಜನೆ ಶೀಘ್ರ ಕೈಗೆತ್ತಿಕೊಳ್ಳಲಾಗುವುದು

5) ಹುಬ್ಬಳ್ಳಿ ಧಾರವಾಡ ನಗರಕ್ಕೆ ಮಲಪ್ರಭಾ ಜಲಾಶಯದಿಂದ ನೀರೊದಗಿಸುವ 3ನೇ ಹಂತದ ರೂ 144 00 ಕೋಟಿಗಳ ಯೋಜನೆ ಸರ್ಕಾರಕ್ಕೆ ಸಲ್ಲಿಸಲಾಗಿದ್ದು, ಪರಿಶೀಲನೆಯಲ್ಲಿದೆ

4) ಹುಬ್ಬಳ್ಳಿ ಧಾರವಾಡ ಅವಳಿ ನಗರದ ಸುತ್ತ ಮುತ್ತಲೂ ಬೆಳೆದಿರುವ ಹೊಸ ಬಡಾವಣೆಗಳನ್ನು ಗಮನಕ್ಕೆ ತೆಗೆದುಕೊಂಡು ವಿವರವಾದ ಅಂದಾಜನ್ನು ತಯಾರಿಸಲು ಸರ್ವೆ ಕಾರ್ಯಕ್ಕೆ ಗುತ್ತಿಗೆ ಕರೆಯಲಾಗಿದ್ದು, ಗುತ್ತಿಗೆ ನಿಗದಿಪಡಿಸುವ ಪ್ರಕ್ರಿಯೆ ಅಂತಿಮ ಹಂತದಲ್ಲಿದೆ ಶೀಘ್ರವೇ ಯೋಜನೆ ಅಂದಾಜನ್ನು ತಯಾರಿಸಲು ಕ್ರಮ ಜರುಗಿಸಲಾಗಿದೆ

**ಚಿಂತಾಮಣಿ ನಗರಸಭಾ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಅಭಾವದ ಬಗ್ಗೆ**

02 (113) ಶ್ರೀ ಚೌಡಾರೆಡ್ಡಿ (ಚಿಂತಾಮಣಿ) ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಚಿಂತಾಮಣಿ ನಗರಸಭೆಯ ವ್ಯಾಪ್ತಿಯಲ್ಲಿರುವ ಸಾರ್ವಜನಿಕರಿಗೆ ಕುಡಿಯುವ ನೀರಿಗಾಗಿ ಎಷ್ಟು ಕೊಳವೆ ಬಾವಿಗಳನ್ನು ಕೊರೆಯಲಾಗಿದೆ ಇದರಲ್ಲಿ ಎಷ್ಟು ಕೊಳವೆ ಬಾವಿಗಳಲ್ಲಿ ನೀರು ಸಿಗುತ್ತಿದೆ

ಆ) ಅನೇಕ ಬಡ ಜನರಿರುವ ಕಾಲೋನಿಗಳಲ್ಲಿ ಕುಡಿಯುವ ನೀರಿಗೆ ಬಹಳ ತೊಂದರೆ ಆಗಿದ್ದು, ಮತ್ತು ಸರ್ಕಾರಿ ಬಾಲಕರ ಮತ್ತು ಬಾಲಕಿಯರ ಕಾಲೇಜುಗಳಲ್ಲಿ ನೀರಿನ ಕೊರತೆ ಜಾಸ್ತಿ ಇದ್ದು, ವಿದ್ಯಾರ್ಥಿಗಳಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ

ಇ) ನೀರಿನ ಅಭಾವ ನೀಗಿಸಲು ಸರ್ಕಾರ ಅತೀ ಜರೂರಾಗಿ ಕ್ರಮ ತೆಗೆದುಕೊಂಡು ಸಾರ್ವಜನಿಕರ ಮತ್ತು ವಿದ್ಯಾರ್ಥಿಗಳ ತೊಂದರೆ ನಿವಾರಿಸಲು ಕ್ರಮ ತೆಗೆದುಕೊಳ್ಳಲಾಗುತ್ತದೆಯೇ?

ಶ್ರೀ ಡಿ ಕೆ ಶಿವಕುಮಾರ್ (ನಗರಾಭಿವೃದ್ಧಿ ಸಚಿವರು)

ಅ) ಚಿಂತಾಮಣಿ ನಗರದಲ್ಲಿ ಒಟ್ಟು 98 ಕೊಳವೆ ಬಾವಿಗಳನ್ನು ಕೊರೆಯಲಾಗಿದೆ ಇದರಲ್ಲಿ 73 ಕೊಳವೆ ಬಾವಿಗಳಲ್ಲಿ ನೀರು ಸಿಗುತ್ತಿದೆ

ಆ) ಹೌದು

ಇ) ನೀರಿನ ಅಭಾವ ನೀಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ

**ರಾಜ್ಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅನಧಿಕೃತ ಪಂಪ್ ಸೆಟ್ಟುಗಳ ಬಗ್ಗೆ**

03 (307) ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಎಷ್ಟು ಅನಧಿಕೃತ ಪಂಪ್ ಸೆಟ್‌ಗಳು ಕಾರ್ಯನಿರ್ವಹಿಸುತ್ತಿವೆ,

ಆ) ಕಳೆದ 1 ವರ್ಷದಿಂದ ಪಂಪ್‌ಸೆಟ್‌ಗಳ ಅಕ್ರಮ ಸಂಪರ್ಕವನ್ನು ಸಕ್ರಮಗೊಳಿಸಲು ಎಷ್ಟು ಅರ್ಜಿಗಳು ಬಂದಿವೆ ಇವುಗಳಲ್ಲಿ ಎಷ್ಟು ಅರ್ಜಿಗಳನ್ನು ಪುರಸ್ಕರಿಸಲಾಗಿದೆ ಮತ್ತು ತಿರಸ್ಕೃತಗೊಂಡ ಅರ್ಜಿಗಳು ಎಷ್ಟು

ಇ) ಅಕ್ರಮ ಸಂಪರ್ಕಗಳ ಸಕ್ರಮೀಕರಣಕ್ಕೆ ಎಷ್ಟು ಹಣ ವಸೂಲು ಮಾಡಲಾಗುತ್ತಿದೆ

ಈ) ರೈತರಿಗೆ ತಮ್ಮದೇ ಆದ ಟ್ರಾನ್ಸ್‌ಫಾರ್ಮರ್ ಹೊಂದಲು ಯೋಜನೆಯನ್ನು ರೂಪಿಸಲಾಗಿದೆ ಹಾಗಿದ್ದಲ್ಲಿ ಅದರ ವಿವರಗಳನ್ನು ನೀಡುವುದು

ಉ) ರೈತರು ಹಣ ನೀಡಿ ಹೊಂದಿದ ಈ ಟ್ರಾನ್ಸ್‌ಫಾರ್ಮರ್‌ಗಳು ವಿದ್ಯುತ್ ಇಲಾಖೆಯ ನಿರ್ಲಕ್ಷದಿಂದ ಅಥವಾ ಅಧಿಕ ವಿದ್ಯುತ್ ಒತ್ತಡ ಒಮ್ಮೆಗೆ ಹೆಚ್ಚಾದಾಗ ವಿಫಲ ಹೊಂದಿದಲ್ಲಿ ಈ ಟ್ರಾನ್ಸ್‌ಫಾರ್ಮರ್ಸ್‌ಗಳನ್ನು ಯಾರು ದುರಸ್ಥಿ ಮಾಡಿಸಬೇಕು

ಊ) ಈ ರೀತಿ ಆದಲ್ಲಿ ವಿದ್ಯುತ್ ಪ್ರಸರಣ ನಿಗಮ ಪರಿಹಾರ ನೀಡುವುದೆ?

ಶ್ರೀ ಬಸವರಾಜ್ ಪಾಟೀಲ್ (ಇಂಧನ ರಾಜ್ಯ ಸಚಿವರು)

ಅ) ರಾಜ್ಯಾದ್ಯಂತ ಸುಮಾರು 2 ಲಕ್ಷ ಅನಧಿಕೃತ ನೀರಾವರಿ ಪಂಪುಸೆಟ್ಟುಗಳು ಚಾಲನೆಯಲ್ಲಿರಬಹುದೆಂದು ಅಂದಾಜು ಮಾಡಲಾಗಿದೆ

ಆ) ಕಳೆದ ಒಂದು ವರ್ಷದ ಅವಧಿಯಲ್ಲಿ ಅನಧಿಕೃತ ನೀರಾವರಿ ಪಂಪು ಸೆಟ್ಟುಗಳನ್ನು ಸಕ್ರಮೀಕರಣಗೊಳಿಸಿಕೊಳ್ಳಲು ಒಟ್ಟು 543 ಅರ್ಜಿಗಳು ಬಂದಿರುತ್ತವೆ ಇವುಗಳ ಪೈಕಿ 484 ಅರ್ಜಿಗಳನ್ನು ಪುರಸ್ಕರಿಸಲಾಗಿದೆ 54 ಅರ್ಜಿಗಳನ್ನು ತಿರಸ್ಕರಿಸಲಾಗಿದೆ

ಇ) ಪ್ರಸ್ತುತ ಅನಧಿಕೃತ ನೀರಾವರಿ ಪಂಪು ಸೆಟ್ಟುಗಳನ್ನು ಸಕ್ರಮೀಕರಣಗೊಳಿಸಲು ಪ್ರತಿ ಬಳಕೆದಾರರು ರೂ 35000/– (ನೋಂದಣಿ ಶುಲ್ಕ ರೇವಣಿ ಇತ್ಯಾದಿಗಳನ್ನು ಹೊರತುಪಡಿಸಿ)ಗಳನ್ನು ಪಾವತಿಸಬೇಕಾಗಿರುತ್ತದೆ

ಈ) ಹೌದು ಈ ಯೋಜನೆಯಡಿ ಹಾಲಿ ಇರುವ 4 ತಂತಿ ಎಲ್ ಟಿ ವ್ಯವಸ್ಥೆಯನ್ನು 3 ತಂತಿ ಹೆಚ್ ಟಿ ವ್ಯವಸ್ಥೆಯನ್ನಾಗಿ ಪರಿವರ್ತಿಸಿ ಅಥವಾ ಹೊಸ ಹೆಚ್ ಟಿ ಮಾರ್ಗವನ್ನು ವಿಸ್ತರಿಸಿ ಹಾಗೂ 10/15 ಕೆ ವಿ ಎ. ಸಾಮರ್ಥ್ಯದ ಟ್ರಾನ್ಸ್‌ಫಾರ್ಮರ್‌ರನ್ನು ಪ್ರತಿ ನೀರಾವರಿ ಪಂಪುಸೆಟ್ಟು ಸ್ಥಾವರಕ್ಕೆ ಅಳವಡಿಸಿ ಅಧಿಕ ವೋಲ್ಟೇಜ್ ಒತ್ತಡದ ವಿತರಣಾ ವ್ಯವಸ್ಥೆಯ ಮೂಲಕ (11 ಕೆ ವಿ) ವಿದ್ಯುತ್ ಸಂಪರ್ಕ ಕಲ್ಪಿಸಲಾಗುತ್ತದೆ ಈ ಯೋಜನೆಯಡಿ ಭಾವೀ ನೀರಾವರಿ ಪಂಪುಸೆಟ್ಟು ಬಳಕೆದಾರರು 10/15 ಕೆ ವಿ ಎ ಸಾಮರ್ಥ್ಯದ ಒಂದು ಪ್ರತ್ಯೇಕ ಪುಟ್ಟ ಟ್ರಾನ್ಸ್‌ಫಾರ್ಮರ್ ನ್ನು ಹೊಂದಿ ಅವರುಗಳ ಸ್ಥಾವರಗಳಿಗೆ ವಿದ್ಯುತ್ ಸಂಪರ್ಕವನ್ನು ಪಡೆಯಬಹುದಾಗಿರುತ್ತದೆ ಈ ಯೋಜನೆಯಡಿ ವಿದ್ಯುತ್ ಸಂಪರ್ಕ ಪಡೆಯಲು ವಿದ್ಯುತ್ ಮಾರ್ಗ ನಿರ್ಮಾಣ ಮತ್ತು ಟ್ರಾನ್ಸ್‌ಫಾರ್ಮರ್ ಅಳವಡಿಕೆಗೆ ತಗಲುವ ವೆಚ್ಚದಲ್ಲಿ ಅವರುಗಳ ಪಾಲನ್ನು ಅಂದರೆ 25 000 00 ರೂ ಗಳನ್ನು (ನೋಂದಣಿ ಶುಲ್ಕ, ರೇವಣಿ ಇತ್ಯಾದಿಗಳನ್ನು ಹೊರತುಪಡಿಸಿ) ಪಾವತಿಸಬೇಕಾಗಿರುತ್ತದೆ ಹಾಲಿ ಇರುವ ನೀರಾವರಿ ಪಂಪುಸೆಟ್ಟು ಸ್ಥಾವರಗಳನ್ನು ಓವೈಟಿ (ತಮ್ಮದೇ ಆದ ಟ್ರಾನ್ಸ್‌ಫಾರ್ಮರ್‌ನ್ನು ಹೊಂದುವ ಯೋಜನೆ) ಸಂಪರ್ಕಕ್ಕೆ ಪರಿವರ್ತಿಸಬೇಕಾದಲ್ಲಿ, ಬಳಕೆದಾರರು ಈ ಕಾರ್ಯಕ್ಕೆ ತಗಲುವ ವೆಚ್ಚದಲ್ಲಿ ಅವರುಗಳ ಪಾಲು ಆದ ರೂ 16 545–00 ಗಳನ್ನು ಪಾವತಿಸಬೇಕಾಗಿರುತ್ತದೆ ಅನಧಿಕೃತ ನೀರಾವರಿ ಪಂಪುಸೆಟ್ಟು ಸ್ಥಾವರಗಳನ್ನು ಸಕ್ರಮೀಕರಣಗೊಳಿಸಲು ಪ್ರತಿ ಬಳಕೆದಾರರು ರೂ 35,000–00 (ನೋಂದಣಿ ಶುಲ್ಕ ರೇವಣಿ ಇತ್ಯಾದಿಗಳನ್ನು ಹೊರತುಪಡಿಸಿ)ಗಳನ್ನು ಪಾವತಿಸಬೇಕಾಗಿರುತ್ತದೆ

ಉ) ಟ್ರಾನ್ಸ್‌ಫಾರ್ಮರ್‌ಗಳು ವಿದ್ಯುತ್ ಇಲಾಖೆಯ ನಿರ್ಲಕ್ಷದಿಂದ ಅಥವಾ ಅಧಿಕ ವಿದ್ಯುತ್ ಒತ್ತಡ ಒಮ್ಮೆಗೆ ಹೆಚ್ಚಾದಾಗ ವಿಫಲ ಹೊಂದಿದಲ್ಲಿ ಈ ಟ್ರಾನ್ಸ್‌ಫಾರ್ಮರ್‌ಗಳನ್ನು ಸಂಬಂಧಿಸಿದ ವಿದ್ಯುತ್ ವಿತರಣಾ ಕಂಪೆನಿಗಳು ದುರಸ್ಥಿ ಮಾಡಿಸಬೇಕಾಗುತ್ತದೆ

ಊ) ಈ ಪ್ರಶ್ನೆ ಉದ್ಭವಿಸುವುದಿಲ್ಲ

**ಚಿಕ್ಕನಾಯಕನಹಳ್ಳಿ ತಾಲ್ಲೂಕು ವ್ಯಾಪ್ತಿಗೆ ವಿದ್ಯುತ್ ಪರಿವರ್ತಕಗಳನ್ನು ಸರಬರಾಜು ಮಾಡುವ ಬಗ್ಗೆ**

04 (171) ಶ್ರೀ ಸುರೇಶ್ ಬಾಬು ಸಿ ಬಿ (ಚಿಕ್ಕನಾಯಕನಹಳ್ಳಿ) ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ವಿದ್ಯುತ್ ಪರಿವರ್ತಕಗಳನ್ನು ರೈತರಿಗೆ ಮತ್ತು ಕುಡಿಯುವ ನೀರಿನ ಉದ್ದೇಶಕ್ಕೆ ಸಕಾಲದಲ್ಲಿ ಒದಗಿಸಲು ಸಾಧ್ಯವಾಗುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಹಾಗಿದ್ದಲ್ಲಿ ಸಕಾಲದಲ್ಲಿ ವಿದ್ಯುತ್ ಪರಿವರ್ತಕಗಳನ್ನು ಒದಗಿಸಲು ಯಾವ ಕ್ರಮ ತೆಗೆದುಕೊಳ್ಳಲಾಗುವುದು

ಇ) ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಹೆಚ್ಚಾಗುವುದರಿಂದ ತ್ವರಿತಗತಿಯಲ್ಲಿ ವಿದ್ಯುತ್ ಪರಿವರ್ತಕಗಳನ್ನು ಒದಗಿಸಲು ಏನು ಕ್ರಮ ತೆಗೆದುಕೊಳ್ಳಲಾಗುವುದು?

ಶ್ರೀ ಬಸವರಾಜ್ ಪಾಟೀಲ್ (ಇಂಧನ ರಾಜ್ಯ ಸಚಿವರು)

ಅ) ಹೌದು ಗಮನಕ್ಕೆ ಬಂದಿದೆ

ಆ) ಕುಡಿಯುವ ನೀರಿನ ಯೋಜನೆಗೆ ಸಂಬಂಧಿಸಿದಂತೆ ವಿಫಲವಾದ ಪರಿವರ್ತಕಗಳನ್ನು ಬದಲಾಯಿಸಲಾಗಿದೆ ನೀರಾವರಿ ಪಂಪ್ ಸೆಟ್‌ಗಳಿಗೆ ಸಂಬಂಧಿಸಿದಂತೆ ವಿಫಲವಾದ ಪರಿವರ್ತಕಗಳನ್ನು ಬದಲಾಯಿಸಲು ಬೇಕಾದ ಪರಿವರ್ತಕಗಳನ್ನು ತುಮಕೂರು ಜಿಲ್ಲೆಯ ದುರಸ್ತಿ ಕೇಂದ್ರ ಹಾಗೂ ಕ ವಿ ಕಾ ಪರಿವರ್ತಕ ತಯಾರಿಕಾ ಕೇಂದ್ರಗಳಿಂದ ಪಡೆಯಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ

ಇ) ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಕುಡಿಯುವ ನೀರಿನ ಸಮಸ್ಯೆ ಇರುವ ಹಳ್ಳಿಗಳಲ್ಲಿ ಪ್ರತ್ಯೇಕವಾಗಿ ಕುಡಿಯುವ ನೀರಿನ ವ್ಯವಸ್ಥೆಗಾಗಿ 28 ಸಂಖ್ಯೆಯ ಅಧಿಕ ಪರಿವರ್ತಕಗಳನ್ನು ಅಳವಡಿಸಲು ಕ್ರಮ ಕೈಗೊಳ್ಳಲಾಗಿದೆ

**ಕಮಲಾಪುರ್ ಕ್ಷೇತ್ರ ವ್ಯಾಪ್ತಿಯಲ್ಲಿ ಇರುವ ಪರಿಶಿಷ್ಟ ಪಂಗಡ ಮತ್ತು ತಾಂಡಾಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸುವುದು**

05 (416) ಶ್ರೀ ರೇವುನಾಯಕ್ ಬೆಳಮಗಿ (ಕಮಲಾಪೂರ್) ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಗುಲ್ಬರ್ಗ ಜಿಲ್ಲೆ ಕಮಲಾಪುರ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಪರಿಶಿಷ್ಟ ಪಂಗಡ ಹಾಗೂ ಲಂಬಾಣಿ ತಾಂಡಗಳ ಹಳೆ ಮತ್ತು ಹೊಸ ಬಡಾವಣೆಗಳಿಗೆ ವಿದ್ಯುತ್ ಸಂಪರ್ಕ ನೀಡಲು ಸರ್ಕಾರ ಕ್ರಮ ಕೈಗೊಂಡಿದೆಯೆ ಹಾಗಿದ್ದಲ್ಲಿ ಯಾವ ರೀತಿಯ ಕ್ರಮ ಕೈಗೊಂಡಿದೇ

ಆ) ಈ ತಾಂಡಗಳ ಪೈಕಿ ಈವರೆಗೆ ಎಷ್ಟು ತಾಂಡಗಳಿಗೆ ವಿದ್ಯುತ್ ಸಂಪರ್ಕ ನೀಡಲಾಗಿದೆ?